# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 136 (43) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) |
| ಉತ್ತರಿಸಬೇಕಾದ ದಿನಾಂಕ | : | 11.08.2025 |
| ಉತ್ತರಿಸುವ ಸಚಿವರು | : | ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು. |

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳು ಮತ್ತು ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರಿಲ್ಲದೆ ಹಾಗೂ ಆಟದ ಮೈದಾನವಿಲ್ಲದೆ ವಿದ್ಯಾರ್ಥಿಗಳು ದೈಹಿಕ ಮಾನಸಿಕ ಖಿನ್ನತೆಯಂತಹ ಸಮಸ್ಯೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು:</td><td>ಬೀದರ ಜಿಲ್ಲೆಯಲ್ಲಿ ಒಟ್ಟು 1221 ಪ್ರಾಥಮಿಕ ಶಾಲೆಗಳಲ್ಲಿ -566 ಶಾಲೆಗಳಿಗೆ ಆಟದ ಮೈದಾನಗಳಿವೆ.<br><br>167 ಪೌಢಶಾಲೆಗಳಲ್ಲಿ- 133 ಶಾಲೆಗಳಿಗೆ ಆಟದ ಮೈದಾನಗಳಿವೆ.<br><br>ದೈಹಿಕ ಶಿಕ್ಷಕರಿಗೆ ಸಂಬಂಧಿಸಿದಂತೆ<br><table><tr><th>ಶಾಲೆ</th><th>ಮಂಜೂರು</th><th>ಕಾರ್ಯನಿರತ</th><th>ಖಾಲಿ</th></tr><tr><td>ಪೌಢಶಾಲೆ</td><td>175</td><td>110</td><td>65</td></tr><tr><td>ಪ್ರಾಥಮಿಕ ಶಾಲೆ</td><td>249</td><td>229</td><td>20</td></tr></table><br>ಆಟದ ಮೈದಾನ ಇಲ್ಲದಿರುವ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರು ತಮ್ಮ ವಿದ್ಯಾರ್ಥಿಗಳಿಗೆ ಒಳಾಂಗಣ ಕ್ರೀಡೆಗಳಾದ ಚೆಸ್, ಯೋಗಾಸನ, ಟೇಬಲ್ ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್, ಕುಸ್ತಿ, ಕರಾಟೆ, ಜುಡೋ, ಜಿಮ್ನಾಸ್ಟಿಕ್ಸ್ ಮುಂತಾದ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳುವಂತೆ ಕ್ರಮ ವಹಿಸಲಾಗಿದೆ.<br><br>ವಿವಿಧ ಹಂತದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಹತ್ತಿರದ ತಾಲ್ಲೂಕು, ಜಿಲ್ಲಾ ಕ್ರೀಡಾಂಗಣ, ನಗರಸಭೆ, ಪುರಸಭೆ ಹಾಗೂ ಮಹಾನಗರ ಪಾಲಿಕೆಗಳ ಆಟದ ಮೈದಾನಗಳನ್ನು ಬಳಸಿಕೊಳ್ಳಲಾಗುತ್ತಿದೆ.</td></tr>
<tr><td>(ಆ)</td><td>ದೈಹಿಕ ಶಿಕ್ಷಣದ ಪಠ್ಯ ಅಳವಡಿಸಿರುವ ಸರ್ಕಾರ ರಾಜ್ಯದಲ್ಲಿ ದೈಹಿಕ ಶಿಕ್ಷಕರ ನೇಮಕ ಮಾಡಿಕೊಳ್ಳದೆ ಮತ್ತು ಮೂಲ ಭೂತ ಸೌಲಭ್ಯ ಕಲ್ಪಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ : ಬಂದಿದ್ದಲ್ಲಿ ದೈಹಿಕ ಶಿಕ್ಷಕರನ್ನು ಯಾವಾಗ ನೇಮಕ ಮಾಡಲಾಗುವುದು? (ಮಾಹಿತಿ ನೀಡುವುದು)</td><td>ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರಲ್ಲಿ ರಾಜ್ಯದ ಸರ್ಕಾರಿ ಪೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ (ದೈಹಿಕ ಶಿಕ್ಷಕರು ಸೇರಿದಂತೆ) ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br><br>ಆದರೆ ಪದವೀಧರರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ ಅನುಮೋದನೆ ನೀಡಿರುವ 15000 ಹುದ್ದೆಗಳಲ್ಲಿ ಪೌಢಶಾಲಾ ಶಿಕ್ಷಕರ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ 2023-24 ನೇ</td></tr>
</table>

| | | |
|---|---|---|
| | | ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವಂತೆ ಆಯುಕ್ತರ ಕಚೇರಿ ಏಕ ಕಡತ ಸಂಖ್ಯೆ:CPI C4-1(APHS)/2/2023(1005454) ರಲ್ಲಿ ಆರ್ಥಿಕ ಇಲಾಖೆಗೆ ಪುನಃ ಕಳುಹಿಸಲಾಗಿದ್ದು ಆರ್ಥಿಕ ಇಲಾಖೆಯು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನೇನಿ2024 ದಿನಾಂಕ:25.11.2024 ರಲ್ಲಿ ನೇರ ನೇಮಕಾತಿ ಮೂಲಕ ಹುದ್ದೆಗಳ ಭರ್ತಿ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿರ್ಬಂಧವನ್ನು ಹಿಂಪಡೆದ / ತೆರವುಗೊಳಿಸಿದ ನಂತರ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಿರುತ್ತದೆ.<br><br>ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024 ದಿನಾಂಕ: 07.10.2024ರ ಆದೇಶದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಹುದ್ದೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ 216 ಹುದ್ದೆಗಳನ್ನು ಸೇರಿ ಪ್ರೌಢ ಶಾಲೆಗಳಿಗೆ 385 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಆದೇಶ ಸಂಖ್ಯೆ: ಸಿಆಸುಇ 388 ಸೇನೇನಿ 2024 ದಿನಾಂಕ: 25/11/2024 ರ ಆದೇಶದಲ್ಲಿ ದಿನಾಂಕ: 28/10/2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ. ಸದರಿ ಆದೇಶವನ್ನು ತೆರವುಗೊಳಿಸಿದ ಕೂಡಲೇ ಕ್ರಮವಹಿಸಲಾಗುವುದು. |

**ಇಪಿ 236 ಎಸ್‌ಇಎಸ್ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖೆ ಸಚಿವರು**